548 (891) ಶ್ರೀ ಮುನಿಯಪ್ಪ ಎಸ್.ಎಂ. (ಚಿಕ್ಕಬಳ್ಳಾಪುರ) :- ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ತಾಲ್ಲೂಕು ಗ್ರಾಮಾಂತರ ಪ್ರದೇಶದಲ್ಲಿ ಪದವಿ ಪೂರ್ವ ಕಾಲೇಜು ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಗ್ರಾಮಾಂತರ ಪ್ರದೇಶದಲ್ಲಿ ಹೊಸ ಪದವಿ ಪೂರ್ವ ಕಾಲೇಜುಗಳನ್ನು ತೆರೆಯುವ ವಿಷಯ ಸರ್ಕಾರದ ಮುಂದಿದೆಯೇ;

ಇ) ಹಾಗಿದ್ದಲ್ಲಿ, ದಿಬ್ಬೂರು ರೆಡ್ಡಿಗೊಲ್ಲವಾರ ಹಳ್ಳಿ, ನಂದಿ, ಪೋಶೆಟ್ಟಿಹಳ್ಳಿ ಗ್ರಾಮಗಳಲ್ಲಿ ಹೊಸ ಪದವಿ ಪೂರ್ವ ಕಾಲೇಜುಗಳನ್ನು ತೆರೆಯಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಶ್ರೀ ಎಸ್. ಬಸವರಾಜ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ, ಆ, ಇ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಮಂಜೂರಾತಿಯು ನಿರಂತರ ಪ್ರಕ್ರಿಯೆಯಾಗಿದ್ದು, ಹತ್ತಿರದಲ್ಲಿರುವ ಸರ್ಕಾರಿ, ಖಾಸಗಿ ಅನುದಾನಿತ/ಅನುದಾನರಹಿತ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ, ಇದರಲ್ಲಿನ ವಿದ್ಯಾರ್ಥಿಗಳ ದಾಖಲಾತಿ ಸಂಖ್ಯೆ, ಪೂರಕ ಪ್ರೌಢಶಾಲೆಗಳ ಸಂಖ್ಯೆ, ಶೈಕ್ಷಣಿಕ ಅಗತ್ಯತೆ, ಆಯವ್ಯಯದಲ್ಲಿನ ಸಂಪನ್ಮೂಲದ ಲಭ್ಯತೆ, ಅಗತ್ಯ ಮೂಲಭೂತ ಸೌಲಭ್ಯಗಳ ಲಭ್ಯತೆಯನ್ನು ಆಧರಿಸಿ ಹಂತಹಂತವಾಗಿ ಮಂಜೂರು ಮಾಡಲಾಗುತ್ತಿದೆ.

ಚಿಕ್ಕಬಳ್ಳಾಪುರ ತಾಲ್ಲೂಕು ಗ್ರಾಮಾಂತರ ಪ್ರದೇಶಗಳಿಂದ ಪದವಿ ಪೂರ್ವ ಕಾಲೇಜನ್ನು ಪ್ರಾರಂಭಿಸುವ ಬಗ್ಗೆ ಯಾವುದೇ ಪ್ರಸ್ತಾವನೆಗಳು ಬಂದಿರುವುದಿಲ್ಲ.

549 (892) ಶ್ರೀ ಎಸ್.ಎಂ. ಮುನಿಯಪ್ಪ (ಚಿಕ್ಕಬಳ್ಳಾಪುರ) :- ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

01) ಚಿಕ್ಕಬಳ್ಳಾಪುರ ತಾಲ್ಲೂಕಿನ ಗ್ರಾಮಾಂತರ ಪ್ರದೇಶಗಳಲ್ಲಿ ಪ್ರೌಢಶಾಲೆಗಳ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;